ಹೊಸತನದ ಹಾದಿಯಲಿ.. ದಿನಪತ್ರಿಕೆ

## ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಸಾಧನೆ ಮಾಡುತ್ತಿರುವುದು ಖುಷಿ ತಂದಿದೆ ಬಸವರಾಜ ಹೊರಟ್ಟಿ

# ಎಸ್‌ಎಸ್‌ಎಲ್‌ಸಿ ರಾಂಕ್ ವಿಜೇತ ವಿದ್ಯಾರ್ಥಿಗಳಿಗೆ ಸನ್ಮಾನ

ಕನ್ನಡ ಜನಶ್ರೀ ಸುದ್ದಿ ಜಾಲ

ಬೆಂಗಳೂರು.. ಇತ್ತೀಚೆಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚೆಚ್ಚು ಸಾಧನೆ ಮಾಡುತ್ತಿರುವುದು ಖುಷಿ ಹಾಗೂ ಅಭಿಮಾನ ತಂದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ಮನದಾಳದ ಮಾತುಗಳನ್ನು ಹೇಳಿದರು.

ಅವರು ತಮ್ಮ ಬೆಂಗಳೂರಿನ ಕಚೇರಿಯಲ್ಲಿ ಎಸ್. ಎಸ್. ಎಲ್. ಸಿ ಪರೀಕ್ಷೆಯಲ್ಲಿ ಮೊದಲ ರಾಂಕ್ ಪಡೆದ ಬಾಗಲಕೋಟ್ ಜಿಲ್ಲೆಯ ಮುಧೋಳ ತಾಲೂಕಿನ ಮಳ್ಳಿಗೆರೆಯ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿನಿ ಅಂಕಿತ ಬಸಪ್ಪ ಹೊಸಮನಿ ಹಾಗೂ ಮೂರನೇ ರಾಂಕ್ ಪಡೆದ ಮಂಡ್ಯ ಜಿಲ್ಲೆಯ ಕಣಲಿ ಗ್ರಾಮದ ನವನೀತ್ ರನ್ನು ಸನ್ಮಾನಿಸಿ ಮಾತನಾಡಿದ ಅವರು ವಿದ್ಯೆ ಯಾರ ಹಾಗೂ ಯಾವ ಜಾತಿಯ ಸ್ವತ್ತು ಅಲ್ಲ. ಲಕ್ಷ ಲಕ್ಷ ಶುಲ್ಕ ಪಡೆಯುವ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆಯಲಿಲ್ಲ. ಶಿಕ್ಷಣ ಹಣದಲ್ಲಿ ಇಲ್ಲ ಕಲಿಯುವ ಇಚ್ಛಾಶಕ್ತಿಯಲ್ಲಿದೆ. ಅಂತಹ ಇಚ್ಛಾಶಕ್ತಿಯನ್ನು ಪ್ರದರ್ಶಿಸಿ ಇಡೀ ನಾಡೇ ಮೆಚ್ಚುವಂತ ಸಾಧನೆ ಮಾಡಿದ ಅಂಕಿತ ಮತ್ತು ನವನೀತ್ ಅವರ ಸಾಧನೆ ನಾಡಿನ ವಿದ್ಯಾರ್ಥಿಗಳಿಗೆ



ಅದರಲ್ಲೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ. ಅದರಲ್ಲೂ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಈ ಸಾಧನೆ ಮಾಡಿದ್ದು ಇನ್ನಷ್ಟು ಸಂತಸ ಅಭಿಮಾನ ಮೂಡಿದೆ. ಸರ್ಕಾರಿ ಶಾಲೆಗಳೆಂದರೆ ಒಂದು ಕಾಲದಲ್ಲಿ ಮೂಗು ಮುರಿಯುವ ದಿನಗಳು ಇದ್ದವು. ಆದರೆ ಇಂದು ಸರ್ಕಾರಿ ಶಾಲೆ ಮಕ್ಕಳು ಯಾರಿಗೆ ಏನು ಕಡಿಮೆ ಇಲ್ಲ ಎಂದು ಸಾಬೀತು ಮಾಡಿ ತೋರಿಸುತ್ತಿದ್ದಾರೆ ಹಾಗೂ ಪ್ರಸ್ತುತ ಸಾಧನೆ ಮಾಡಿ ತೋರಿಸಿದ್ದಾರೆ. ದಿನದಿಂದ ದಿನಕ್ಕೆ ಸರ್ಕಾರಿ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚುತ್ತಿದೆ. ಅದಕ್ಕೆ ಕಾರಣ 2006 -7ರಲ್ಲಿ ನಾನು ಶಿಕ್ಷಣ ಸಚಿವನಾಗಿದ್ದಾಗ ಶಿಕ್ಷಕರ ಆಯ್ಕೆಯಲ್ಲಿ ಹಾಗೂ ವರ್ಗಾವಣೆಯಲ್ಲಿ ಸಾಕಷ್ಟು ಪಾರದರ್ಶಕತೆಯನ್ನು ತಂದ ಪರಿಣಾಮದಿಂದಾಗಿ ಇದು ಸಾಧ್ಯವಾಗಿದೆ ಎಂದು ಹೇಳಲು ನನಗಂತೂ ಸಾಕಷ್ಟು ಅಭಿಮಾನ ಎನಿಸುತ್ತದೆ. ಸರ್ಕಾರಿ ಶಾಲೆಗಳಿಗೆ ಸಾಕಷ್ಟು ಪ್ರತಿಭಾವಂತ ಶಿಕ್ಷಕರು ನೇಮಕಗೊಳ್ಳುತ್ತಿರುವುದರಿಂದ ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತಹ ವಾತಾವರಣ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಇದರ ಪರಿಣಾಮದಿಂದಾಗಿ ಇಂದು ಸಾಕಷ್ಟು ಸರ್ಕಾರಿ ಶಾಲೆ ಮಕ್ಕಳು ಉತ್ಕೃಷ್ಟ ಮಟ್ಟದ ಶಿಕ್ಷಣ ಪಡೆದು ಎಸೆಸೆಲ್ಸಿ ಪಿ.ಯು.ಸಿಯಲ್ಲಿ ಸಾಧನೆ ಮಾಡುತ್ತಿದ್ದಾರೆ. ವಿಶೇಷವಾಗಿ ಗ್ರಾಮೀಣ ಭಾಗದಿಂದ ಬಂದ ಅಂಕಿತ .ಹೊಸಮನಿ 625ಕ್ಕೆ 625 ಅಂಕ ಪಡೆದು ವಿಶಿಷ್ಟ ಸಾಧನೆ ಮಾಡಿದ್ದು ಇದು ಶೈಕ್ಷಣಿಕ ಕ್ಷೇತ್ರದಲ್ಲಿ ಒಂದು ಮೈಲುಗಲ್ಲಾಗಿ ಉಳಿಯುತ್ತದೆ. ಇಂತಹ ಮಕ್ಕಳ ಸಾಧನೆಯನ್ನು ಕಂಡ ನಾಡಿನ ವಿದ್ಯಾರ್ಥಿಗಳು ನಾವು ಯಾರಿಗೇನು ಕಮ್ಮಿ ಇಲ್ಲ ಎನ್ನುವಂತೆ ಸಾಧನೆ ಮಾಡಲು ಮುಂದಾಗಲಿ ಎಂದು ಆಶಿಸಿದರು. ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಏನೆಲ್ಲಾ ಸಾಧಿಸಬಹುದು ಎನ್ನುವುದಕ್ಕೆ ಇವರಿಬ್ಬರೇ ಸಾಕ್ಷಿ, ಆ ನಿಟ್ಟಿನತ್ತ ವಿದ್ಯಾರ್ಥಿಗಳು ಹೆಜ್ಜೆ ಹಾಕಲಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ಹಾಗೂ ಅವರ ಪಾಲಕರನ್ನ ಹಾಗೂ ಶಿಕ್ಷಕ ವೃಂದದವರನ್ನ ಸಭಾಪತಿ ಬಸವರಾಜ ಹೊರಟ್ಟಿ ಅವರು ಗೌರವಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪಾಲಕರು ಶಿಕ್ಷಕ ವೃಂದ ಹಾಗೂ ಸಭಾಪತಿ ಕಚೇರಿ ಅವರ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಸಭಾಪತಿಯವರು, ಕಷ್ಟಪಟ್ಟು ಓದಿದರೆ ಯಾರು ಬೇಕಾದರೂ ಸಾಧನೆ ಮಾಡಬಹುದು ಎಂಬುವುದನ್ನು ಈ ವಿದ್ಯಾರ್ಥಿಗಳು ತೋರಿಸಿಕೊಟ್ಟಿದ್ದಾರೆ. ಟಾಪರ್ಸ್ ಆಗಲು ದೊಡ್ಡ ಶಾಲೆಯಲ್ಲಿ ಓದಬೇಕು ಇಂಗ್ಲೀಷ ಕಾನ್ವೆಂಟ್ ಶಾಲೆಯಲ್ಲಿ ಓದಬೇಕೆಂದೇನಿಲ್ಲ ಎಂಬುದನ್ನು ಈ ಇಬ್ಬರೂ ತೋರಿಸಿಕೊಟ್ಟಿದ್ದಾರೆ. ಸಾಧನೆ ಮಾಡಲು ವಿದ್ಯಾರ್ಥಿಗಳಿಗೆ ಇವರ ಪ್ರಯತ್ನ ದಾರಿದೀಪವಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ತಿನ ಕಾರ್ಯದರ್ಶಿ ಕೆ.ಆರ್ ಮಹಾಲಕ್ಷ್ಮಿ, ಡಾ. ಮಹೇಶ್ ವಾಳ್ವೇಕರ್, ಅಂಕಿತಾಳ ತಂದೆ ಬಸಪ್ಪ, ತಾಯಿ ಗೀತಾ ಕೊಣ್ಣೂರ, ಕುಮಾರ ನವನೀತ ಕೆ.ಸಿ ತಂದೆ ಚೆನ್ನೆಗೌಡ ಕೆ.ಸಿ ತಾಯಿ ವೆಂಕಟಲಕ್ಷ್ಮಮ್ಮ ಸೇರಿದಂತೆ ಪರಿಷತ್ತಿನ ವಿವಿಧ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಸಂಯುಕ್ತ ಕರ್ನಾಟಕ

# ಅಂಕಿತಾಗೆ ಸಭಾಪತಿ ಸನ್ಮಾನ



**ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 625ಕ್ಕೆ 625 ಅಂಕ ಪಡೆದ ಏಕೈಕ ವಿದ್ಯಾರ್ಥಿನಿ ಅಂಕಿತಾ ಕೊಣ್ಣೂರ ಅವರನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರು ಮಂಗಳವಾರ ಬೆಂಗಳೂರಿನಲ್ಲಿ ಮೈಸೂರು ಪೇಟಾ ಹಾಕಿ ಸನ್ಮಾನಿಸಿದರು.**

**ಹುಬ್ಬಳ್ಳಿ;** ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 625ಕ್ಕೆ 625 ಅಂಕ ಪಡೆದ ಅಂಕಿತಾ ಕೊಣ್ಣೂರ ಹಾಗೂ 625ಕ್ಕೆ 623 ಅಂಕ ಪಡೆದು ತೃತೀಯ ಸ್ಥಾನ ಪಡೆದ ಕುಮಾರ ನವನೀತ ಕೆ.ಸಿ ಅವರನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಯವರು ಮಂಗಳವಾರ ಬೆಂಗಳೂರಿನಲ್ಲಿ ಮೈಸೂರು ಪೇಟಾ ಹಾಕಿ ಸನ್ಮಾನಿಸಿದರು.

# ಎಸ್‌ಎಸ್‌ಎಲ್‌ಸಿಯಲ್ಲಿ ಸಾಧನೆಗೈದ ಅಂಕಿತಾ ಮತ್ತು ನವನೀತ್ ಗ್ರಾಮೀಣ ವಿದ್ಯಾರ್ಥಿಗಳಿಗೆ ಪ್ರೇರಣೆ : ಹೊರಟ್ಟಿ



**ಬೆಂಗಳೂರು:** ಇತ್ತೀಚೆಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚೆಚ್ಚು ಸಾಧನೆ ಮಾಡುತ್ತಿರುವುದು ಖುಷಿ ಹಾಗೂ ಅಭಿಮಾನ ತಂದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ಮನದಾಳದ ಮಾತುಗಳನ್ನು ಹೇಳಿದರು.

ಅವರು ತಮ್ಮ ಬೆಂಗಳೂರಿನ ಕಚೇರಿಯಲ್ಲಿ ಎಸ್. ಎಸ್. ಎಲ್. ಸಿ ಪರೀಕ್ಷೆಯಲ್ಲಿ ಮೊದಲ ರಾಂಕ್ ಪಡೆದ ಬಾಗಲಕೋಟ ಜಿಲ್ಲೆಯ ಮುಧೋಳ ತಾಲೂಕಿನ ಮೆಳ್ಳಿಗೆರೆಯ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿನಿ ಅಂಕಿತ ಬಸಪ್ಪ ಹೊಸಮನಿ ಹಾಗೂ ಮೂರನೇ ರಾಂಕ್ ಪಡೆದ ಮಂಡ್ಯ ಜಿಲ್ಲೆಯ ಕಣಲಿ ಗ್ರಾಮದ ನವನೀತ್ ರನ್ನು ಸನ್ಮಾನಿಸಿ ಮಾತನಾಡಿದ ಅವರು, ವಿದ್ಯೆ, ಯಾರ ಹಾಗೂ ಯಾವ ಜಾತಿಯ ಸ್ವತ್ತು ಅಲ್ಲ. ಲಕ್ಷ ಲಕ್ಷ ಶುಲ್ಕ ಪಡೆಯುವ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆಯಲಿಲ್ಲ. ಶಿಕ್ಷಣ ಹಣದಲ್ಲಿ ಇಲ್ಲ ಕಲಿಯುವ ಇಚ್ಛಾಶಕ್ತಿಯಲ್ಲಿದೆ. ಅಂತಹ ಇಚ್ಛಾಶಕ್ತಿಯನ್ನು ಪ್ರದರ್ಶಿಸಿ ಇಡೀ ನಾಡೇ ಮೆಚ್ಚುವಂತ ಸಾಧನೆ ಮಾಡಿದ ಅಂಕಿತ ಮತ್ತು ನವನೀತ್ ಅವರ ಸಾಧನೆ ನಾಡಿನ ವಿದ್ಯಾರ್ಥಿಗಳಿಗೆ ಅದರಲ್ಲೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ ಎಂದರು.

ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಏನೆಲ್ಲಾ ಸಾಧಿಸಬಹುದು ಎನ್ನುವುದಕ್ಕೆ ಇವರಿಬ್ಬರೇ ಸಾಕ್ಷಿ. ಆ ನಿಟ್ಟಿನತ್ತ ವಿದ್ಯಾರ್ಥಿಗಳು ಹೆಜ್ಜೆ ಹಾಕಲಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ಹಾಗೂ ಅವರ ಪಾಲಕರನ್ನ ಹಾಗೂ ಶಿಕ್ಷಕ ವೃಂದದವರನ್ನ ಸಭಾಪತಿ ಬಸವರಾಜ ಹೊರಟ್ಟಿ ಅವರು ಗೌರವಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪಾಲಕರು ಶಿಕ್ಷಕ ವೃಂದ ಹಾಗೂ ಸಭಾಪತಿ ಕಚೇರಿ ಅವರ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಇಂದು ಸಂಜೆ
IS Email indusanje@gmail.com

# ಸಭಾಪತಿ ಬಸವರಾಜ ಹೊರಟ್ಟಿ ಅವರಿಂದ ಎಸ್‌ಎಸ್‌ಎಲ್‌ಸಿ ರ್‍ಯಾಂಕ್ ವಿಜೇತ ವಿದ್ಯಾರ್ಥಿಗಳಿಗೆ ಸನ್ಮಾನ



ಬೆಂಗಳೂರು.. ಇತ್ತೀಚೆಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚೆಚ್ಚು ಸಾಧನೆ ಮಾಡುತ್ತಿರುವುದು ಖುಷಿ ಹಾಗೂ ಅಭಿಮಾನ ತಂದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ಮನದಾಳದ ಮಾತುಗಳನ್ನು ಹೇಳಿದರು.

ಅವರು ತಮ್ಮ ಬೆಂಗಳೂರಿನ ಕಚೇರಿಯಲ್ಲಿ ಎಸ್. ಎಸ್. ಎಲ್. ಸಿ ಪರೀಕ್ಷೆಯಲ್ಲಿ ಮೊದಲ ರಾಂಕ್ ಪಡೆದ ಬಾಗಲಕೋಟ್ ಜಿಲ್ಲೆಯ ಮುಧೋಳ ತಾಲೂಕಿನ ಮೆಳ್ಳಿಗೇರಿಯ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿನಿ ಅಂಕಿತ ಬಸಪ್ಪ ಕೊಣಸೂರಿ ಹಾಗೂ ಮೂರನೇ ರಾಂಕ್ ಪಡೆದ ಮಂಡ್ಯ ಜಿಲ್ಲೆಯ ಕೀಲಾರ ಗ್ರಾಮದ ನವನೀತ್ ರನ್ನು ಸನ್ಮಾನಿಸಿ ಮಾತನಾಡಿದ ಅವರು ವಿದ್ಯೆ ಯಾರ ಹಾಗೂ ಯಾವ ಜಾತಿಯ ಸ್ವತ್ತು ಅಲ್ಲ. ಲಕ್ಷ ಲಕ್ಷ ಶುಲ್ಕ ಪಡೆಯುವ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆಯಲಿಲ್ಲ. ಶಿಕ್ಷಣ ಹಣದಲ್ಲಿ ಇಲ್ಲ ಕಲಿಯುವ ಇಚ್ಛಾಶಕ್ತಿಯಲ್ಲಿದೆ. ಅಂತಹ ಇಚ್ಛಾಶಕ್ತಿಯನ್ನು ಪ್ರದರ್ಶಿಸಿ ಇಡೀ ನಾಡೇ ಮೆಚ್ಚುವಂತ ಸಾಧನೆ ಮಾಡಿದ ಅಂಕಿತ ಮತ್ತು ನವನೀತ್ ಅವರ ಸಾಧನೆ ನಾಡಿನ ವಿದ್ಯಾರ್ಥಿಗಳಿಗೆ ಅದರಲ್ಲೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ. ಅದರಲ್ಲೂ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಈ ಸಾಧನೆ ಮಾಡಿದ್ದು ಇನ್ನಷ್ಟು ಸಂತಸ ಅಭಿಮಾನ ಮೂಡಿದೆ. ಸರ್ಕಾರಿ ಶಾಲೆಗಳೆಂದರೆ ಒಂದು ಕಾಲದಲ್ಲಿ ಮೂಗು ಮುರಿಯುವ ದಿನಗಳು ಇದ್ದವು. ಆದರೆ ಇಂದು ಸರ್ಕಾರಿ ಶಾಲೆ ಮಕ್ಕಳು ಯಾರಿಗೆ ಏನು ಕಡಿಮೆ ಇಲ್ಲ ಎಂದು ಸಾಬೀತು ಮಾಡಿ ತೋರಿಸುತ್ತಿದ್ದಾರೆ ಹಾಗೂ ಪ್ರಸ್ತುತ ಸಾಧನೆ ಮಾಡಿ ತೋರಿಸಿದ್ದಾರೆ. ದಿನದಿಂದ ದಿನಕ್ಕೆ ಸರ್ಕಾರಿ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚುತ್ತಿದೆ. ಅದಕ್ಕೆ ಕಾರಣ 2006 –7ರಲ್ಲಿ ನಾನು ಶಿಕ್ಷಣ ಸಚಿವನಾಗಿದ್ದಾಗ ಶಿಕ್ಷಕರ ಆಯ್ಕೆಯಲ್ಲಿ ಹಾಗೂ ವರ್ಗಾವಣೆಯಲ್ಲಿ ಸಾಕಷ್ಟು ಪಾರದರ್ಶಕತೆಯನ್ನು ತಂದ ಪರಿಣಾಮದಿಂದಾಗಿ ಇದು ಸಾಧ್ಯವಾಗಿದೆ ಎಂದು ಹೇಳಲು ನನಗಂತೂ ಸಾಕಷ್ಟು ಅಭಿಮಾನ ಎನಿಸುತ್ತದೆ. ಸರ್ಕಾರಿ ಶಾಲೆಗಳಿಗೆ ಸಾಕಷ್ಟು ಪ್ರತಿಭಾವಂತ ಶಿಕ್ಷಕರು ನೇಮಕಗೊಳ್ಳುತ್ತಿರುವುದರಿಂದ ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತಹ ವಾತಾವರಣ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಇದರ ಪರಿಣಾಮದಿಂದಾಗಿ ಇಂದು ಸಾಕಷ್ಟು ಸರ್ಕಾರಿ ಶಾಲೆ ಮಕ್ಕಳು ಉತ್ಕೃಷ್ಟ ಮಟ್ಟದ ಶಿಕ್ಷಣ ಪಡೆದು ಎಸೆಸೆಲ್ಸಿ ಪಿ.ಯು.ಸಿಯಲ್ಲಿ ಸಾಧನೆ ಮಾಡುತ್ತಿದ್ದಾರೆ. ವಿಶೇಷವಾಗಿ ಗ್ರಾಮೀಣ ಭಾಗದಿಂದ ಬಂದ ಅಂಕಿತ .ಕೊಣಸೂರಿ 625ಕ್ಕೆ 625 ಅಂಕ ಪಡೆದು ವಿಶಿಷ್ಟ ಸಾಧನೆ ಮಾಡಿದ್ದು ಇದು ಶೈಕ್ಷಣಿಕ ಕ್ಷೇತ್ರದಲ್ಲಿ ಒಂದು ಮೈಲಿಗಲ್ಲಾಗಿ ಉಳಿಯುತ್ತದೆ. ಅಂತಹ ಮಕ್ಕಳ ಸಾಧನೆಯನ್ನು ಕಂಡ ನಾಡಿನ ವಿದ್ಯಾರ್ಥಿಗಳು ನಾವು ಯಾರಿಗೇನು ಕಮ್ಮಿ ಇಲ್ಲ ಎನ್ನುವಂತೆ ಸಾಧನೆ ಮಾಡಲು ಮುಂದಾಗಲಿ ಎಂದು ಆಶಿಸಿದರು. ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಏನೆಲ್ಲಾ ಸಾಧಿಸಬಹುದು ಎನ್ನುವುದಕ್ಕೆ ಇವರಿಬ್ಬರೇ ಸಾಕ್ಷಿ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಹೆಜ್ಜೆ ಹಾಕಲಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ಹಾಗೂ ಅವರ ಪಾಲಕರನ್ನ ಹಾಗೂ ಶಿಕ್ಷಕ ವೃಂದದವರನ್ನ ಸಭಾಪತಿ ಬಸವರಾಜ ಹೊರಟ್ಟಿ ಅವರು ಗೌರವಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪಾಲಕರು ಶಿಕ್ಷಕ ವೃಂದ ಹಾಗೂ ಸಭಾಪತಿ ಕಚೇರಿ ಅವರ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ ರ್‍ಯಾಂಕ್ ವಿಜೇತ ವಿದ್ಯಾರ್ಥಿಗಳಿಗೆ ಸನ್ಮಾನಿಸಿದ ಹೊರಟ್ಟಿ



**ಬೆಂಗಳೂರು :** ಇತ್ತೀಚೆಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಸಾಧನೆ ಮಾಡುತ್ತಿರುವುದು ಖುಷಿ ಹಾಗೂ ಅಭಿಮಾನ ತಂದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ತಮ್ಮ ಬೆಂಗಳೂರಿನ ಕಚೇರಿಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮೊದಲ ರ್‍ಯಾಂಕ್ ಪಡೆದ ಬಾಗಲಕೋಟ ಜಿಲ್ಲೆಯ ಮುಧೋಳ ತಾಲೂಕಿನ ಮೆಳ್ಳಿಗೆರೆಯ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿನಿ ಅಂಕಿತ ಬಸಪ್ಪ ಹೊಸಮನಿ ಹಾಗೂ ಮೂರನೇ ರಾಂಕ್ ಪಡೆದ ಮಂಡ್ಯ ಜಿಲ್ಲೆಯ ಕಣಲಿ ಗ್ರಾಮದ ನವನೀತ್ ಅವರನ್ನು ಸನ್ಮಾನಿಸಿ ಮಾತನಾಡಿದರು. ವಿದ್ಯೆ ಯಾರ ಹಾಗೂ ಯಾವ ಜಾತಿಯ ಸ್ವತ್ತು ಅಲ್ಲ. ಲಕ್ಷ-ಲಕ್ಷ ಶುಲ್ಕ ಪಡೆಯುವ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆಯಲಿಲ್ಲ. ಶಿಕ್ಷಣ ಹಣದಲ್ಲಿ ಇಲ್ಲ, ಕಲಿಯುವ ಇಚ್ಛಾಶಕ್ತಿಯಲ್ಲಿದೆ. ಅಂತಹ ಇಚ್ಛಾಶಕ್ತಿಯನ್ನು ಪ್ರದರ್ಶಿಸಿ ಇಡೀ ನಾಡೇ ಮೆಚ್ಚುವಂತಹ ಸಾಧನೆ ಮಾಡಿದ ಅಂಕಿತ ಮತ್ತು ನವನೀತ್ ಅವರ ಸಾಧನೆ ನಾಡಿನ ವಿದ್ಯಾರ್ಥಿಗಳಿಗೆ ಅದರಲ್ಲೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ. ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಈ ಸಾಧನೆ ಮಾಡಿದ್ದು ಇನ್ನಷ್ಟು ಸಂತಸ ಅಭಿಮಾನ ಮೂಡಿದೆ. ಸರ್ಕಾರಿ ಶಾಲೆಗಳೆಂದರೆ ಒಂದು ಕಾಲದಲ್ಲಿ ಮೂಗು ಮುರಿಯುವ ದಿನಗಳಿದ್ದವು. ಆದರೆ ಇಂದು ಸರ್ಕಾರಿ ಶಾಲೆ ಮಕ್ಕಳು ಯಾರಿಗೆ ಏನೂ ಕಡಿಮೆ ಇಲ್ಲ ಎಂದು ಸಾಬೀತು ಮಾಡಿ ತೋರಿಸುತ್ತಿದ್ದಾರೆ. ಪ್ರಸ್ತುತ ಸಾಧನೆ ಮಾಡಿ ತೋರಿಸಿದ್ದಾರೆ. ದಿನದಿಂದ ದಿನಕ್ಕೆ ಸರ್ಕಾರಿ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚುತ್ತಿದೆ. ಅದಕ್ಕೆ ಕಾರಣ 2006-07ರಲ್ಲಿ ನಾನು ಶಿಕ್ಷಣ ಸಚಿವನಾಗಿದ್ದಾಗ ಶಿಕ್ಷಕರ ಆಯ್ಕೆಯಲ್ಲಿ ಹಾಗೂ ವರ್ಗಾವಣೆಯಲ್ಲಿ ಸಾಕಷ್ಟು ಪಾರದರ್ಶಕತೆಯನ್ನು ತಂದ ಪರಿಣಾಮದಿಂದಾಗಿ ಇದು ಸಾಧ್ಯವಾಗಿದೆ ಎಂದು ಹೇಳಲು ನನಗಂತೂ ಸಾಕಷ್ಟು ಅಭಿಮಾನ ಎನಿಸುತ್ತದೆ. ಸರ್ಕಾರಿ ಶಾಲೆಗಳಿಗೆ ಸಾಕಷ್ಟು ಪ್ರತಿಭಾವಂತ ಶಿಕ್ಷಕರು ನೇಮಕಗೊಳ್ಳುತ್ತಿರುವುದರಿಂದ ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುವಂತಹ ವಾತಾವರಣ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಇದರ ಪರಿಣಾಮದಿಂದಾಗಿ ಇಂದು ಸಾಕಷ್ಟು ಸರ್ಕಾರಿ ಶಾಲೆ ಮಕ್ಕಳು ಉತ್ಕೃಷ್ಟ ಮಟ್ಟದ ಶಿಕ್ಷಣ ಪಡೆದು ಎಸ್ಸೆಸ್ಸೆಲ್ಸಿ, ಪಿ.ಯು.ಸಿಯಲ್ಲಿ ಸಾಧನೆ ಮಾಡುತ್ತಿದ್ದಾರೆ. ವಿಶೇಷವಾಗಿ ಗ್ರಾಮೀಣ ಭಾಗದಿಂದ ಬಂದ ಅಂಕಿತ ಹೊಸಮನಿ 625ಕ್ಕೆ 625ಅಂಕ ಪಡೆದು ವಿಶಿಷ್ಟ ಸಾಧನೆ ಮಾಡಿದ್ದು, ಇದು ಶೈಕ್ಷಣಿಕ ಕ್ಷೇತ್ರದಲ್ಲಿ ಒಂದು ಮೈಲುಗಲ್ಲಾಗಿ ಉಳಿಯುತ್ತದೆ. ಇಂತಹ ಮಕ್ಕಳ ಸಾಧನೆಯನ್ನು ಕಂಡ ನಾಡಿನ ವಿದ್ಯಾರ್ಥಿಗಳು ನಾವು ಯಾರಿಗೇನು ಕಮ್ಮಿ ಇಲ್ಲ ಎನ್ನುವಂತೆ ಸಾಧನೆ ಮಾಡಲು ಮುಂದಾಗಲಿ ಎಂದು ಆಶಿಸಿದರು.

ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಏನೆಲ್ಲಾ ಸಾಧಿಸಬಹುದು ಎನ್ನುವುದಕ್ಕೆ ಇವರಿಬ್ಬರೇ ಸಾಕ್ಷಿ. ಆ ನಿಟ್ಟಿನತ್ತ ವಿದ್ಯಾರ್ಥಿಗಳು ಹೆಜ್ಜೆ ಹಾಕಲಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ಹಾಗೂ ಅವರ ಪಾಲಕರನ್ನು ಹಾಗೂ ಶಿಕ್ಷಕ ವೃಂದದವರನ್ನು ಗೌರವಿಸಿ ಸನ್ಮಾನಿಸಿದರು. ಈ ವೇಳೆ ಸಭಾಪತಿ ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು.

ಇಂದು ಮುಂಜಾನೆ
ನಿತ್ಯದ ವಿದ್ಯಮಾನಗಳ ನಿಮ್ಮ ಬೆಳಗಿನ ಸಂಗಾತಿ
INDU MUNJANE, Kannada Daily | ಕನ್ನಡ ದಿನಪತ್ರಿಕೆ
16 May 2024


# ಎಸ್‌ಎಸ್‌ಎಲ್‌ಸಿಯಲ್ಲಿ ಸಾಧನೆಗೈದ ಅಂಕಿತಾ ಮತ್ತು ನವನೀತ್ ಗ್ರಾಮೀಣ ವಿದ್ಯಾರ್ಥಿಗಳಿಗೆ ಪ್ರೇರಣೆ ; ಹೊರಟ್ಟಿ



**ಬೆಂಗಳೂರು:** ಇತ್ತೀಚೆಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚೆಚ್ಚು ಸಾಧನೆ ಮಾಡುತ್ತಿರುವುದು ಖುಷಿ ಹಾಗೂ ಅಭಿಮಾನ ತಂದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ಮನದಾಳದ ಮಾತುಗಳನ್ನು ಹೇಳಿದರು.

ಅವರು ತಮ್ಮ ಬೆಂಗಳೂರಿನ ಕಚೇರಿಯಲ್ಲಿ ಎಸ್. ಎಸ್. ಎಲ್. ಸಿ ಪರೀಕ್ಷೆಯಲ್ಲಿ ಮೊದಲ ರಾಂಕ್ ಪಡೆದ ಬಾಗಲಕೋಟ ಜಿಲ್ಲೆಯ ಮುಧೋಳ ತಾಲೂಕಿನ ಮೆಳ್ಳಿಗೆರೆಯ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿನಿ ಅಂಕಿತ ಬಸಪ್ಪ ಹೊಸಮನಿ ಹಾಗೂ ಮೂರನೇ ರಾಂಕ್ ಪಡೆದ ಮಂಡ್ಯ ಜಿಲ್ಲೆಯ ಕಣಲಿ ಗ್ರಾಮದ ನವನೀತ್ ರನ್ನು ಸನ್ಮಾನಿಸಿ ಮಾತನಾಡಿದ ಅವರು, ವಿದ್ಯೆ ಯಾರ ಹಾಗೂ ಯಾವ ಜಾತಿಯ ಸ್ವತ್ತು ಅಲ್ಲ. ಲಕ್ಷ ಲಕ್ಷ ಶುಲ್ಕ ಪಡೆಯುವ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆಯಲಿಲ್ಲ. ಶಿಕ್ಷಣ ಹಣದಲ್ಲಿ ಇಲ್ಲ ಕಲಿಯುವ ಇಚ್ಚಾಶಕ್ತಿಯಲ್ಲಿದೆ. ಅಂತಹ ಇಚ್ಚಾಶಕ್ತಿಯನ್ನು ಪ್ರದರ್ಶಿಸಿ ಇಡೀ ನಾಡೇ ಮೆಚ್ಚುವಂತ ಸಾಧನೆ ಮಾಡಿದ ಅಂಕಿತ ಮತ್ತು ನವನೀತ್ ಅವರ ಸಾಧನೆ ನಾಡಿನ ವಿದ್ಯಾರ್ಥಿಗಳಿಗೆ ಅದರಲ್ಲೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ ಎಂದರು.

ವಿದ್ಯಾರ್ಥಿಗಳು ಮನಸ್ಸು ಮಾಡಿದರೆ ಏನೆಲ್ಲಾ ಸಾಧಿಸಬಹುದು ಎನ್ನುವುದಕ್ಕೆ ಇವರಿಬ್ಬರೇ ಸಾಕ್ಷಿ. ಆ ನಿಟ್ಟಿನತ್ತ ವಿದ್ಯಾರ್ಥಿಗಳು ಹೆಜ್ಜೆ ಹಾಕಲಿ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಬ್ಬರು ವಿದ್ಯಾರ್ಥಿಗಳನ್ನು ಹಾಗೂ ಅವರ ಪಾಲಕರನ್ನ ಹಾಗೂ ಶಿಕ್ಷಕ ವೃಂದದವರನ್ನ ಸಭಾಪತಿ ಬಸವರಾಜ ಹೊರಟ್ಟಿ ಅವರು ಗೌರವಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪಾಲಕರು ಶಿಕ್ಷಕ ವೃಂದ ಹಾಗೂ ಸಭಾಪತಿ ಕಚೇರಿ ಅವರ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.